ಲಿಖಿತ ಮೂಲಕ ಉತ್ತರಿಸುವ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತನೆಯ ಅಧಿವೇಶನ

ಗುರುವಾರ, ದಿನಾಂಕ : 19 ನೇ ಮಾರ್ಚ್, 2020

ರಾಜ್ಯದಲ್ಲಿರುವ ಜಲಾಶಯಗಳಲ್ಲಿ ಹೂಳು ತುಂಬಿರುವ ಕುರಿತು

ಶ್ರೀ ಕಾಂತರಾಜ್ (ಬಿ.ಎಂ.ಎಲ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-

1303 (1493) ಮಾನ್ಯ ಜಲಸಂಪನ್ಮೂಲ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿರುವ ಒಟ್ಟು ಜಲಾಶಯಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು ಮಾಹಿತಿ ನೀಡುವುದು)(ಬೃಹತ್/ಮಧ್ಯಮ/ಚಿಕ್ಕ ಜಲಾಶಯಗಳು ಸೇರಿದಂತೆ)

(ಆ) ಈ ಜಲಾಶಯಗಳನ್ನು ಯಾವಾಗ ನಿರ್ಮಿಸಲಾಗಿದೆ; ಮತ್ತು ಎಷ್ಟು ಪ್ರಮಾಣದ ನೀರಿನ ಸಂಗ್ರಹದ ಸಾಮರ್ಥ್ಯ ಹೊಂದಿದೆ; (ಸಂಪೂರ್ಣ ಮಾಹಿತಿ ಒದಗಿಸುವುದು)

(ಇ) ಈ ಜಲಾಶಯಗಳಲ್ಲಿ ಇಲ್ಲಿಯ ತನಕ ಎಷ್ಟು ಬಾರಿ ಹೂಳನ್ನು ತೆಗೆಯಲಾಗಿದೆ ; (ಮಾಹಿತಿ ಒದಗಿಸುವುದು)

(ಈ) ಈ ಜಲಾಶಯಗಳಲ್ಲಿ ಹೂಳು ತುಂಬಿರುವುದರಿಂದ ನೀರಿನ ಸಂಗ್ರಹದ ಸಾಮರ್ಥ್ಯ ಕಡಿಮೆಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿಲ್ಲವೆ ;

(ಉ) ಬಂದಿದ್ದಲ್ಲಿ, ಸರ್ಕಾರವು ಜಲಾಶಯಗಳಲ್ಲಿ ಹೂಳು ತೆಗೆಯಲು ಹಾಕಿಕೊಂಡಿರುವ ಕಾರ್ಯಕ್ರಮಗಳೇನು ? (ಪೂರ್ಣ ಮಾಹಿತಿ ನೀಡುವುದು)